# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 839(1007)
2) ಸದಸ್ಯರ ಹೆಸರು : ಶ್ರೀ ಎನ್.ಎಸ್.ಬೋಸ್‌ರಾಜು
(ವಿಧಾನ ಸಭೆಯಿಂದ ಚುನಾಯಿತರಾದವರು)
3) ಉತ್ತರಿಸುವ ದಿನಾಂಕ : 19.12.2018
4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಾನ್ವಿ ಪಟ್ಟಣದಲ್ಲಿ ಮಂಜೂರಾತಿಯಾಗಿರುವ 'ಟ್ರೀ ಪಾರ್ಕ್' ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ತಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಮಾನ್ವಿ ಪಟ್ಟಣದ ಮಲ್ಲಿಕಾರ್ಜುನ ಬೆಟ್ಟ ಟ್ರೀಪಾರ್ಕನ್ನು 2017-18ನೇ ಸಾಲಿನಲ್ಲಿ ನಿರ್ಮಾಣ ಕಾರ್ಯ ಕೈಗೊಂಡಿದ್ದು, ಸದರಿ ಸಾಲಿನಲ್ಲಿ 6 ಹೆಕ್ಟೇರ್ ಪ್ರದೇಶದ ಹಳೆಯ ನೆಡುತೋಪನ್ನು ನಿರ್ವಹಣೆ ಮಾಡಲಾಗುತ್ತಿದೆ. ಇದರಲ್ಲಿ 3 ಹೆಕ್ಟೇರ್ ಪ್ರದೇಶದಲ್ಲಿ 14"x 20" ಅಳತೆಯ ಸಸಿಗಳನ್ನು ಹಾಗೂ ಇನ್ನುಳಿದ 3 ಹೆಕ್ಟೇರ್ ಪ್ರದೇಶದಲ್ಲಿ 10"x 16" ಅಳತೆಯ ಸಸಿಗಳನ್ನು ನೆಟ್ಟಿದ್ದು, ಇವುಗಳನ್ನು ನಿರ್ವಹಣೆ ಮಾಡಲಾಗುತ್ತಿದೆ. ಇದರ ಜೊತೆಗೆ ಪ್ರಸಕ್ತ ಸಾಲಿನಲ್ಲಿ ಶೌಚಾಲಯ, ಕುಳಿತುಕೊಳ್ಳಲು ಸಿಮೆಂಟ್ ಬೆಂಚ್‌ಗಳು, ನಡಿಗೆಪಥ, ವಾಚರ್ ಶೆಡ್, ಮಾಹಿತಿ ಫಲಕಗಳು, ಪ್ರವೇಶ ದ್ವಾರ ನಿರ್ಮಾಣ, ಪರಗೋಲ, ಮಕ್ಕಳು ಆಡುವ ಆಟಿಕೆಗಳು , ಟಿಕೇಟ್ ಕೌಂಟರ್ ಇತ್ಯಾದಿ ಕಾಮಗಾರಿಗಳನ್ನು ಅನುದಾನದ ಲಭ್ಯತೆಯ ಮೇರೆಗೆ ಈವರೆಗೂ ಈ ಕೆಳಕಂಡಂತೆ ಅನುದಾನವನ್ನು ಬಿಡುಗಡೆ ಮಾಡಿ ಅಭಿವೃದ್ಧಿ ಪಡಿಸಲಾಗುತ್ತಿದೆ. |

| ವರ್ಷ | ಬಿಡುಗಡೆ ಮಾಡಿರುವ ಅನುದಾನ (ರೂ. ಲಕ್ಷಗಳಲ್ಲಿ) |
|---|---|
| 2017-18 | 20.000 |
| 2018-19 | 22.013 |
| ಒಟ್ಟು | **42.013** |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಆ) | ರಾಯಚೂರು ಜಿಲ್ಲೆಯಲ್ಲಿರುವ ಅರಣ್ಯ ಪ್ರದೇಶವನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ರಾಯಚೂರು ಜಿಲ್ಲೆಯಲ್ಲಿ ಈ ಕೆಳಗೆ ನಮೂದಿಸಿದ ವರ್ಷಗಳಲ್ಲಿ ನೆಡುತೋಪು ಬೆಳೆಸಿ ಅರಣ್ಯ ಅಭಿವೃದ್ಧಿ ಪಡಿಸಲಾಗಿರುತ್ತದೆ. |

| ವರ್ಷ | ವಿಸ್ತೀರ್ಣ (ಹೆ./ಕಿ.ಮೀ.) |
|---|---|
| 2016-17 | 1641 |
| 2017-18 | 1872 |
| 2018-19 (ಅಕ್ಟೋಬರ್ ಅಂತ್ಯದವರೆಗೆ) | 787 |

| | | |
|---|---|---|
| | | ಭಾರತೀಯ ಅರಣ್ಯ ಸಮೀಕ್ಷೆ 2017ರ ಪ್ರಕಾರ ರಾಯಚೂರು ಜಿಲ್ಲೆಯಲ್ಲಿ 2015-17ರ ಅವಧಿಯಲ್ಲಿ ಅರಣ್ಯ ಮತ್ತು ವೃಕ್ಷ ಹೊದಿಕೆ 20 ಚದರ ಕಿ.ಮೀ. ಹೆಚ್ಚಾಗಿರುತ್ತದೆ.<br><br>**ಅರಣ್ಯ ಅಭಿವೃದ್ಧಿಗಾಗಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.**<br><br>• ಅರಣ್ಯ ಹೊದಿಕೆ ಮತ್ತು ವೃಕ್ಷ ಕವಚವನ್ನು ಹೆಚ್ಚಿಸುವ ಸಲುವಾಗಿ ಅರಣ್ಯೀಕರಣ ಕಾಮಗಾರಿಗಳನ್ನು ಸರ್ಕಾರದಿಂದ ಬಿಡುಗಡೆಯಾಗುವ ಅನುದಾನದಲ್ಲಿ ಸದರಿ ಯೋಜನೆಗಳಡಿ ನೆಡುತೋಪು ನಿರ್ಮಾಣ ಮತ್ತು ನಿರ್ವಹಣೆ ಮಾಡಲಾಗುತ್ತಿದೆ.<br>• ವನಮಹೋತ್ಸವ ಕಾರ್ಯಕ್ರಮದಡಿ ಶಾಲಾ ಕಾಲೇಜುಗಳು, ಸರ್ಕಾರಿ ಕಛೇರಿಗಳ ಆವರಣದಲ್ಲಿ ಮತ್ತು ಸಂಘ ಸಂಸ್ಥೆಗಳ ಜಮೀನುಗಳಲ್ಲಿ ಸಸಿಗಳನ್ನು ನೆಡುವುದು ಮತ್ತು ಶಾಲಾ-ಕಾಲೇಜು ವಿದ್ಯಾರ್ಥಿಗಳು, ಸರ್ಕಾರೇತರ ಸಂಘ-ಸಂಸ್ಥೆ ಹಾಗೂ ಸಾರ್ವಜನಿಕರುಗಳ ಸಹಭಾಗಿತ್ವದಲ್ಲಿ ಸೂಕ್ತ ಸ್ಥಳಗಳಲ್ಲಿ ಬೀಜ / ಬೀಜದುಂಡೆಗಳನ್ನು ಬಿತ್ತನೆ ಮಾಡುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಸಾರ್ವಜನಿಕರಲ್ಲಿ ಅರಣ್ಯ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.<br>• ರಸ್ತೆಯ ಇಕ್ಕೆಲಗಳಲ್ಲಿ ನೆಡುತೋಪು ಬೆಳೆಸುವ ಮೂಲಕ ಸಾರ್ವಜನಿಕರಿಗೆ ಹಾಗೂ ಪ್ರಾಣಿ ಪಕ್ಷಿಗಳಿಗೆ ನೆರಳು ಒದಗಿಸಲಾಗುತ್ತಿದೆ. ಅಲ್ಲದೆ, ನೈಸರ್ಗಿಕ ಸಮತೋಲನವನ್ನು ಕಾಪಾಡಲಾಗುತ್ತಿದೆ.<br>• ಮಾಲಿನ್ಯವನ್ನು ತಡೆಗಟ್ಟುವ ನಿಟ್ಟಿನಲ್ಲಿ ನಗರ/ ಮುನಿಸಿಪಲ್ / ಪಟ್ಟಣ ಪಂಚಾಯತ್ ಪ್ರದೇಶಗಳಲ್ಲಿ ಎತ್ತರವಾದ ಸಸಿಗಳನ್ನು ನೆಡಲಾಗುತ್ತಿದೆ.<br>• ರೈತರಿಗೆ / ಸಾರ್ವಜನಿಕರಿಗೆ / ಸಂಘ-ಸಂಸ್ಥೆಗಳಿಗೆ ಹೆಚ್ಚು ಹೆಚ್ಚು ಸಸಿಗಳನ್ನು ಬೆಳೆಸಲು ಉತ್ತೇಜಿಸುವ ಸಲುವಾಗಿ ಕೃಷಿ ಅರಣ್ಯ ಪ್ರೋತ್ಸಾಹ ಯೋಜನೆಯಡಿ ರಿಯಾಯಿತಿ ದರಗಳಲ್ಲಿ ಸಸಿಗಳನ್ನು ನೀಡಿ ಮೂರು ವರ್ಷಗಳಲ್ಲಿ ಬದುಕುಳಿದ ಪ್ರತಿ ಸಸಿಗೆ ರೂ.100/- ರಂತೆ ಪ್ರೋತ್ಸಾಹ ಧನವನ್ನು ನೀಡಲಾಗುತ್ತಿದೆ.<br>• ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಗಳಡಿ ಪರಿಶಿಷ್ಟ ಜಾತಿ / ಪಂಗಡದ ಜನಾಂಗಗಳಿಗೆ ಉಚಿತವಾಗಿ ಎಲ್‌ಪಿಜಿ ಸಂಪರ್ಕ ಮತ್ತು ಸೋಲಾರ್ ವಾಟರ್ ಹೀಟರ್ ಸೌಲಭ್ಯ, ಜೇನುಪೆಟ್ಟಿಗೆ ವಿತರಣೆ ತರಬೇತಿ ಮತ್ತು ಇತ್ಯಾದಿಗಳನ್ನು ಒದಗಿಸುವ ಮೂಲಕ ಅರಣ್ಯದ ಮೇಲಿನ ಒತ್ತಡವನ್ನು ಕಡಿಮೆ ಮಾಡುವುದಲ್ಲದೇ ಅವರುಗಳ ಆರ್ಥಿಕ ಜೀವನದ ಮಟ್ಟ ಸುಧಾರಿಸಲಾಗುತ್ತಿದೆ. |

| | | | |
|---|---|---|---|
| | | | • 2018-19ನೇ ಸಾಲಿನಿಂದ ಹಸಿರು ಕರ್ನಾಟಕ ಎಂಬ ಹೊಸ ಯೋಜನೆಯನ್ನು ಘೋಷಿಸಿದ್ದು, ಇದರಡಿ 2019ನೇ ಮಳೆಗಾಲದಲ್ಲಿ ಮನೆಗೊಂದು ಮರ, ಊರಿಗೊಂದು ತೋಪು, ತಾಲ್ಲೂಕಿಗೊಂದು ಕಿರು ಅರಣ್ಯ, ಜಿಲ್ಲೆಗೊಂದು ಕಾಡು ಬೆಳೆಸಲು ಉದ್ದೇಶಿಸಲಾಗಿದೆ. ಅಲ್ಲದೆ ಶಾಲಾ-ಕಾಲೇಜುಗಳ ಅಂಗಳದಲ್ಲಿ, ಸಾರ್ವಜನಿಕರ ಮನೆಯ ಆವರಣ/ಅಂಗಳದಲ್ಲಿ 16,000 ಸಸಿಗಳನ್ನು ನೆಡಲಾಗಿದೆ. |

ಸಂಖ್ಯೆ: ಅಪಜೀ 76 ಎಫ್‌ಟಿಎಸ್ 2018

**(ಆರ್. ಶಂಕರ್)**

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು